ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Ostro Dakshin Power Private Limited ಕಂಪನಿಗೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 100 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ: 1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:KRED/08/ODPPL-100 MW/MANDALMARI/KOPPAL /2016/O-1338

2 ದಿನಾಂಕ: 07.05.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು

* * *

**ಪ್ರಸ್ತಾವನೆ :-**

M/s Ostro Dakshin Power Private Limited ಕಂಪನಿಯವರು ಕೊಪ್ಪಳ ಜಿಲ್ಲೆ, ಯಲಬುರ್ಗಾ ತಾಲ್ಲೂಕಿನ ಚಿಕ್ ಕೊಪ್ಪ, ತುಮ್ಮರ್ ಗುಡ್ಡಿ, ಮನ್ನಾಲ್, ಹೊಸಹಳ್ಳಿ, ಹನ್ಮಾಪುರ್, ಲಗ್ಲೂರ್, ಮಡ್ಲೂರ್, ತಲೂರ್ ತಾಂಡ, ಮುರಡಿ ತಾಂಡ, ಯಲಬರ್ಗಾ, ಕುದ್ರಿಕೊಟಗಿ, ವೀರಾಪುರ್, ಕಲ್ಲೂರ್, ಮಲಕ್ ಸಮುದ್ರ, ಗೊಡ್‌ಗೇರಿ, ಚಿಕ್‌ಮೆಗೇರಿ, ಗುಟ್ಟೂರ್, ಲಕ್ಷ್ಮಣ್‌ಗುಡ್ಡ, ವಂಗೇರಿ, ಮುರಡಿ, ನರಸಾಪುರ್, ಹುಲಿಗುಡ್, ಮಂಡಲ್‌ಮಾರಿ, ತಲ್ಲೂರ್ ಮತ್ತು ಗುಡಗಂತಿ ಗ್ರಾಮಗಳಲ್ಲಿ 100 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :07.05.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು. ಸಮಿತಿಯ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s Ostro Dakshin Power Private Limited ಕಂಪನಿಯವರು ಕೊಪ್ಪಳ ಜಿಲ್ಲೆ, ಯಲಬುರ್ಗಾ ತಾಲ್ಲೂಕಿನ ಚಿಕ್‌ಕೊಪ್ಪ, ತುಮ್ಮರ್ ಗುಡ್ಡಿ, ಮನ್ನಾಲ್, ಹೊಸಹಳ್ಳಿ, ಹನ್ಮಾಪುರ್, ಲಗ್ಲೂರ್, ಮಡ್ಲೂರ್, ತಲೂರ್ ತಾಂಡ, ಮುರಡಿ ತಾಂಡ, ಯಲಬರ್ಗಾ, ಕುದ್ರಿಕೊಟಗಿ, ವೀರಾಪುರ್, ಕಲ್ಲೂರ್, ಮಲಕ್‌ಸಮುದ್ರ, ಗೊಡ್‌ಗೇರಿ, ಚಿಕ್‌ಮೆಗೇರಿ, ಗುಟ್ಟೂರ್, ಲಕ್ಷ್ಮಣ್‌ಗುಡ್ಡ, ವಂಗೇರಿ, ಮುರಡಿ, ನರಸಾಪುರ್, ಹುಲಿಗುಡ್, ಮಂಡಲ್‌ಮಾರಿ, ತಲ್ಲೂರ್ ಮತ್ತು ಗುಡಗಂತಿ ಗ್ರಾಮಗಳಲ್ಲಿ 100 ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಸಲ್ಲಿಸಿರುವುದರಿಂದ, ಸದರಿ ಕಂಪನಿಗೆ 100 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 113 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 06.08.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, M/s Ostro Dakshin Power Private Limited ಕಂಪನಿಗೆ ಕೊಪ್ಪಳ ಜಿಲ್ಲೆ, ಯಲಬುರ್ಗಾ ತಾಲ್ಲೂಕಿನ ಚಿಕ್ ಕೊಪ್ಪ, ತುಮ್ಮರ್ ಗುಡ್ಡಿ, ಮನ್ನಾಲ್, ಹೊಸಹಳ್ಳಿ, ಹನ್ಮಾಪುರ್, ಲಗ್ಲೂರ್, ಮಡ್ಲೂರ್, ತಲೂರ್ ತಾಂಡ, ಮುರಡಿ ತಾಂಡ, ಯಲಬರ್ಗಾ, ಕುದ್ರಿಕೊಟಗಿ, ವೀರಾಪುರ್, ಕಲ್ಲೂರ್, ಮಲಕ್‌ಸಮುದ್ರ, ಗೊಡ್‌ಗೇರಿ,

ಗುಟ್ಟೂರ್, ಲಕ್ಷ್ಮಣ್‌ಗುಡ್ಡ, ವಂಗೇರಿ, ಮುರಡಿ, ನರಸಾಪುರ್, ಹುಲಿಗುಡ್, ಮಂಡಲ್‌ಮಾರಿ, ತಲ್ಲೂರ್ ಮತ್ತು ಗುಡಗಂತಿ ಗ್ರಾಮಗಳಲ್ಲಿ 100 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

**Schedule**

**Geographical area description for 100 MW capacity wind power project**

| Sl.No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 57 A/2 | 100 MW (100 Nos x 1 MW) | Chik Koppa, Tummar Guddi, Marnal, Hosahalli, Hanmapur, Laghur, Madlur, Talur Tanda, Murdi Tanda, Yelbarga, Kudri Kotgi, Wirapur, Kallur, Molak Samudra, Godgeri, Chik Megeri, Guttur, Lakshman Gudda, Wangeri, Murdi, Narasapur, Huligud, Mandalmari, Talur and Gudganti Villages of **Yalburga Taluk, Koppal District.** | The identified area is plain and non-plain type. Non-plain has vegetation and is also of open scrub type. In plains, there is a presence of river and some water bodies. Further, it appears to be agriculture activities in the plains. The identified area is having several peaks and is surrounded by the points A, B, C, D, E, F, G and are held in the following Geographical co-ordinates as:<br>**Point A**:Lat:15°32'9.24"N, Long: 76°0'0"E<br>**Point B**:Lat:15°40'0"N, Long: 76°0'0"E<br>**Point C**:Lat:15°40'0"N, Long: 76°1'9.12"E<br>**Point D**:Lat:15°37'52.03"N, Long:76°5'0"E<br>**Point E**:Lat:15°37'0.8"N, Long: 76°7'19.27"E<br>**Point F**:Lat:15°36'57.09"N, Long: 76°10'0"E<br>**Point G**:Lat:15°32'10.53"N, Long: 76°10'0"E<br>**Peaks:** 627, 603, 607, 590, 596, 580, 574, 632, 620, 606, 613, 523, 575, 580, 577, 622, 623, 593 and 585m AMSL. |
| | Total | 100 MW | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮ್ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

---3)

5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೂಡ ಅನುಮತಿಸಲಾಗಿದೆ.

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ದಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

10. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿಶ್ವನಾಥ ಪಿ ಹಿರೇಮಠ),
ಸರ್ಕಾರದ ಉಪ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001
3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

---4)